**ದಿನಾಂಕ: 05.12.2020 ರಂದು 10-30 ಕ್ಕೆ ಡಾ. ಸುರೇಶ್, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-179 (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 179ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಬೀದಿ ದೀಪ ನಿರ್ವಹಣಾ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ) |
| ಸದಸ್ಯರುಗಳು | ಯೋಜನೆ (ದಕ್ಷಿಣ) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಬೃಹತ್ ನೀರುಗಾಲುವೆ ಅಭಿಯಂತರರು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ನಾಗರೀಕ ಕಲ್ಯಾಣ ಸಂಘ |

## :ನಡಾವಳಿಯ ವರದಿ:

➢ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಅನುಷಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ಪು.ತಿ.ನೋ.**

<u>ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.</u>

- ಪ್ರತಿನಿತ್ಯ ಕಸ ಗುಡಿಸುವ ಪೌರ ಕಾರ್ಮಿಕರರು ಸರಿಯಾದ ಸಮಯಕ್ಕೆ ಸ್ವಚ್ಛಗೊಳಿಸುವ ಬಗ್ಗೆ ಚರ್ಚಿಸಲಾಯಿತು.
- ಹಸಿ ಕಸ, ಒಣಕಸವನ್ನು ವಿಂಗಡಿಸುವ ಬಗ್ಗೆ ಚರ್ಚಿಸಲಾಯಿತು.
- ಸಂಗಮ್ ಸರ್ಕಲ್ ಹತ್ತಿರ, ಬಿಡಬ್ಲ್ಯೂಎಸ್‌ಎಸ್‌ಬಿ ರವರು ರಸ್ತೆಬದಿಯಲ್ಲಿ ಪೈಪ್‌ಗಳನ್ನು ಅಲ್ಲಿಯೇ ಬಿಟ್ಟಿರುತ್ತಾರೆ. ಅದನ್ನು ತೆರವುಗೊಳಿಸುವಂತೆ ಸೂಚಿಸಲಾಯಿತು.
- 2ನೇ ಮುಖ್ಯರಸ್ತೆ, 46ನೇ ಅಡ್ಡರಸ್ತೆಯಿಂದ 40ನೇ ಅಡ್ಡರಸ್ತೆಯ ಬದಿಗಳಲ್ಲಿ ಹಳೆಯ ಮೋಟಾರು ವಾಹನಗಳನ್ನು ತೆರವುಗೊಳಿಸುವಂತೆ ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 10.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀಮತಿ ಅನುಪಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ವಾರ್ಡ್ ಸಮಿತಿ ಅಧ್ಯಕ್ಷರು | ಸದಸ್ಯ ಕಾರ್ಯದರ್ಶಿ ಹಾಗೂ |
| ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ | ಸಹಾಯಕ ಅಭಿಯಂತರರು ವಾರ್ಡ್ 179 |
| ವಾರ್ಡ್ ನಂ. 179 ಶಾಖಾಂಬರಿನಗರ | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |